**ಸಾಕ್ಷಿಗೆ ದಿನಾಂಕಃ 28.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ Smt.NP ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.**2** ದಾಖಲೆಯು ತೆಲುಗು ಭಾಷೆಯಲ್ಲಿ ಇದೆ. ನಿ.ಪಿ.**2** ದಾಖಲೆಯನ್ನು ಕನ್ನಡ ಭಾಷೆಗೆ ಭಾಷಾಂತರ ಮಾಡಿರುವ ಪ್ರತಿಯನ್ನು ನಿ.ಪಿ.**2(ಎ)** ಎಂದು ಗುರುತಿಸಿದೆ.

3) **Intimation of Accident** ದಾಖಲೆಯನ್ನು ನಿ.ಪಿ.**3** ಎಂದು, **ಕಚ್ಚಾ ನಕ್ಷೆಗಳನ್ನು** ನಿ.ಪಿ.**4** ಮತ್ತು ನಿ.ಪಿ.**5** ಎಂದು ಗುರುತಿಸಿದೆ.

4) ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**6** ಎಂದು ಮತ್ತು ಅಂತಿಮ ವರದಿಯನ್ನು ನಿ.ಪಿ.**7** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.1 ರಿಂದ ನಿ.ಪಿ.7 ಎಂದು ಗುರುತು ಆಗಿರುವ ದಾಖಲೆಗಳು V.Satram ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

5) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**8** ಮತ್ತು ನಿ.ಪಿ.**8(**ಎ**)** ಎಂದು ಗುರುತಿಸಿದೆ.

6) ರಮಾದೇವಿ ಆಸ್ಪತ್ರೆಯವರು ನೀಡಿರುವ ದಾಖಲೆಯನ್ನು ನಿ.ಪಿ.**9** ಎಂದು ಮತ್ತು ಮತ್ತೊಂದು **ಡಿಸ್ಚಾರ್ಜ್ ಸಮ್ಮರಿ ಅನ್ನು ನಿ.ಪಿ.10 ಎಂದು ಗುರುತಿಸಿದೆ.**

7) ಜಿ.ಕೆ.ಸ್ಪೇಷಾಲಿಟಿ ಆಸ್ಪತ್ರೆಯವರು ನೀಡಿರುವ **ಡಿಸ್ಚಾರ್ಜ್ ಸಮ್ಮರಿ ಅನ್ನು ನಿ.ಪಿ.11 ಮತ್ತು ನಿ.ಪಿ.11(ಎ) ರಿಂದ ನಿ.ಪಿ.11(**ಎಫ್**)** ಎಂದು ಗುರುತಿಸಿದೆ.

8) ಒಟ್ಟು **33** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**12** ಎಂದು ಗುರುತಿಸಿದೆ.

9) ಒಟ್ಟು **33 Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**13** ಎಂದು ಗುರುತಿಸಿದೆ.

10) ಒಟ್ಟು **4** ಫೋಟೋ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**14** ರಿಂದ ನಿ.ಪಿ.**17** ಎಂದು ಗುರುತಿಸಿದೆ.
ಸೂಚನೆಃ ನಿ.ಪಿ.**14** ರಿಂದ ನಿ.ಪಿ.**17** ಎಂದು ಗುರುತು ಆಗಿರುವ ಫೋಟೋಗಳಲ್ಲಿ ಈ ಅರ್ಜಿದಾರರ ಚಿತ್ರಗಳು ಇವೆ.

11) ಈ ಫೋಟೋಗಳಲ್ಲಿ ಇರುವ ಚಿತ್ರಗಳನ್ನು ಒಳಗೊಂಡಿರುವಂತಹ ಸಿ.ಡಿ. ಅನ್ನು ನಿ.ಪಿ.**18** ಎಂದು ಗುರುತಿಸಿದೆ.

12)ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**19** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

13) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲು: 1 ನೇ ಎದುರುದಾರರ ಪರವಾಗಿಃ</u>**

1 ನೇ ಎದುರುದಾರರು ಏಕ ಪಕ್ಷೀಯವಾಗಿದ್ದಾರೆ. ಆದ ಕಾರಣದಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಪಾಟೀ ಸವಾಲು: 2 ನೇ ಎದುರುದಾರರ ಪರ ವಕೀಲರಿಂದಃ</u>**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ ಮತ್ತು ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.